ಕರ್ನಾಟಕ ಸರ್ಕಾರ

ಕಡತ ಸಂಖ್ಯೆ: ಪಪೂಶಿ/ಶೈ.ಶಾ-06/ಹೆ.ವಿ.ಅನು/2016-17

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಸಂಪಿಗೆ ರಸ್ತೆ, ಮಲ್ಲೇಶ್ವರಂ 18ನೇ ಕ್ರಾಸ್,
ಬೆಂಗಳೂರು-12, ದಿನಾಂಕ -07-2016.
5/8/2016

## ಜ್ಞಾಪನ

ವಿಷಯ: 2016-17ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಪಿಯುಸಿ ತರಗತಿಗಳಿಗೆ ಹೆಚ್ಚುವರಿ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ:
1. ಜಿಲ್ಲಾ ಉಪ ನಿರ್ದೇಶಕರು ಹಾಗೂ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಂದ ಬಂದಿರುವ ಮನವಿಗಳು
2. ಸರ್ಕಾರದ ಪತ್ರ ಸಂಖ್ಯೆ ಇಡಿ 407 ಎಸ್‌ಹೆಚ್‌ಹೆಚ್ 2016 ದಿನಾಂಕ 23-06-2016

*******

ಈ ಕೆಳಕಂಡ ಪದವಿ ಪೂರ್ವ ಕಾಲೇಜುಗಳಲ್ಲಿ 2016-17ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ಪಿಯುಸಿ ದಾಖಲಾತಿಯಲ್ಲಿ ಪ್ರತಿ ವಿಭಾಗದಲ್ಲಿ ಗರಿಷ್ಠ 80 ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿರುತ್ತದೆ. ಆದರೆ 2016ರ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷಾ ಫಲಿತಾಂಶವು ಹೆಚ್ಚಾಗಿದ್ದು, ಪ್ರಥಮ ಪಿಯುಸಿ ದಾಖಲಾತಿಗಾಗಿ ವಿದ್ಯಾರ್ಥಿಗಳಿಂದ ಮತ್ತು ಪೋಷಕರಿಂದ ಒತ್ತಡ/ಬೇಡಿಕೆ ಉಂಟಾಗುತ್ತಿರುವುದಾಗಿ ಉಲ್ಲೇಖಿತ ಪತ್ರಗಳಲ್ಲಿ ತಿಳಿಸಿರುತ್ತಾರೆ. ಸದರಿ ಕೋರಿಕೆಗಳನ್ನು ಪರಿಶೀಲಿಸಲಾಯಿತು.

2016-17ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅನ್ವಯಿಸಿ ಪ್ರತಿ ಕಾಲೇಜಿನ ಮುಂದೆ ನಮೂದಿಸಿರುವ ಸಂಯೋಜನೆ ಮತ್ತು ವಿಭಾಗಗಳಲ್ಲಿ ಹೆಚ್ಚುವರಿಯಾಗಿ ಗರಿಷ್ಠ 20 (ಇಪ್ಪತ್ತು) ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಲು ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಅನುಮತಿ ನೀಡಲಾಗಿದೆ.

| ಕ್ರ.ಸ | ಕಾಲೇಜಿನ ಸಂಕೇತ ಸಂಖ್ಯೆ | ಕಾಲೇಜಿನ ಹೆಸರು ಮತ್ತು ವಿಳಾಸ | ಸಂಯೋಜನೆ ಮತ್ತು ವಿಷಯ ಸಂಕೇತ ಸಂಖ್ಯೆಗಳು |
|---|---|---|---|
| 01 | JJ-211 | ಹಿರೇಮಲ್ಲೂರ ಈಶ್ವರನ್ ಪದವಿ ಪೂರ್ವ ಕಾಲೇಜು, ಕಲ್ಯಾಣನಗರ, ಧಾರವಾಡ ಜಿಲ್ಲೆ | PCMB-33,34,35,36 |
| 02 | SS-005 | ಸೈಂಟ್ ಅಲೋಸಿಯಸ್ ಪದವಿ ಪೂರ್ವ ಕಾಲೇಜು, ಮಂಗಳೂರು | PCMB-33,34,35,36<br>SEBA-22,27,30,31 |
| 03 | NN-225 | ವಿಜಯ ವಿಠಲ ಸಂಯುಕ್ತ ಪದವಿ ಪೂರ್ವ ಕಾಲೇಜು, ಸರಸ್ವತಿಪುರಂ, ಮೈಸೂರು ಜಿಲ್ಲೆ | EBACs-22,27,30,41 |

ಷರತ್ತುಗಳು:

1. ಈ ಅನುಮತಿಯು 2016-17ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿಯುಸಿ ದಾಖಲಾತಿಗೆ ಮಾತ್ರ ಅನ್ವಯಿಸುತ್ತದೆ.
2. ಮುಂದಿನ ಶೈಕ್ಷಣಿಕ ವರ್ಷಗಳಲ್ಲಿ ಪೂರ್ವಾನುಮತಿ ಇಲ್ಲದೆ 80 ವಿದ್ಯಾರ್ಥಿಗಳಿಗಿಂತ ಹೆಚ್ಚಿನ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳಬಾರದು.

....2

3. ಹೆಚ್ಚುವರಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಮಾರ್ಗಸೂಚಿಯಲ್ಲಿ ನಿಗದಿಪಡಿಸಿರುವ ಶುಲ್ಕಗಳನ್ನು ಮಾತ್ರ ಪಡೆಯತಕ್ಕದ್ದು.
4. ಹಾಲಿ ಅನುಮತಿಸಿರುವ ಹೆಚ್ಚುವರಿ 20 ವಿದ್ಯಾರ್ಥಿಗಳನ್ನು ಈಗಾಗಲೇ ಇಲಾಖೆಯಿಂದ ಬೋಧಿಸಲು ಮಂಜೂರಾತಿ ನೀಡಿರುವ ಭಾಷಾ ವಿಷಯ, ಐಚ್ಛಿಕ ವಿಷಯ ಮತ್ತು ಸಂಯೋಜನೆಗಳಿಗೆ ಮಾತ್ರ ಹಾಗೂ ವಿಭಾಗಗಳಿಗೆ ಮಾತ್ರ ಅನ್ವಯಿಸುವುದು. ಇಲಾಖೆಯಿಂದ ಬೋಧಿಸಲು ಮಂಜೂರಾತಿ ಪಡೆಯದೇ ಇರುವ ಭಾಷಾ ವಿಷಯ, ಸಂಯೋಜನೆಗಳಿಗೆ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳತಕ್ಕದ್ದಲ್ಲ.
5. ಹೆಚ್ಚುವರಿ ವಿದ್ಯಾರ್ಥಿಗಳ ಬೋಧನೆಯನ್ನು ಹಾಲಿ ನೇಮಕ ಮಾಡಿಕೊಂಡಿರುವ ಉಪನ್ಯಾಸಕರಿಂದಲೇ ಬೋಧಿಸತಕ್ಕದ್ದು. ಹೆಚ್ಚುವರಿ ಉಪನ್ಯಾಸಕರ ನೇಮಕಾತಿಗೆ ಅವಕಾಶವಿರುವುದಿಲ್ಲ.
6. ಹೆಚ್ಚುವರಿ ವಿದ್ಯಾರ್ಥಿಗಳ ದಾಖಲಾತಿಯಿಂದ ಯಾವುದೇ ರೀತಿಯಲ್ಲಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡತಕ್ಕದ್ದಲ್ಲ.
7. ಹೆಚ್ಚುವರಿ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಂಡಿರುವುದರಿಂದ ಸಮೀಪದ ಅಥವಾ ನೆರೆಹೊರೆಯ ಇತರೆ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕೊರತೆ ಉಂಟಾಗಬಾರದು ಮತ್ತು ಅನಾರೋಗ್ಯಕರ ಸ್ಪರ್ದೆ ಉಂಟಾಗಬಾರದು.
8. ಹೆಚ್ಚುವರಿ ವಿದ್ಯಾರ್ಥಿಗಳ ದಾಖಲಾತಿ ಮಾಡಿಕೊಳ್ಳುವ ಮುನ್ನ ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 4ಕ್ಕೆ ಅನುಗುಣವಾಗಿ ಸದರಿ ವಿದ್ಯಾರ್ಥಿಗಳಿಗೆ ಅಗತ್ಯ/ಮೂಲಭೂತ ಸೌಲಭ್ಯಗಳು ಇರುವುದನ್ನು ಅಥವಾ ಹೊಂದಿಸಿಕೊಂಡಿರುವುದನ್ನು ಖಾತ್ರಿಪಡಿಸಿಕೊಂಡ ನಂತರವೇ ಹೆಚ್ಚುವರಿ ವಿದ್ಯಾರ್ಥಿಗಳ ದಾಖಲಾತಿ ಮಾಡಿಕೊಳ್ಳತಕ್ಕದ್ದು.
9. ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳ ವಿಸ್ತೀರ್ಣ ಮತ್ತು ಸಂಖ್ಯೆ ಸರಿ ಹೊಂದಿದಲ್ಲಿ ಮಾತ್ರ ವಿದ್ಯಾರ್ಥಿಗಳ ದಾಖಲಾತಿ ಮಾಡಿಕೊಳ್ಳತಕ್ಕದ್ದು.
10. ಹೆಚ್ಚುವರಿ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಂಡ ಬಗ್ಗೆ ಪ್ರತಿಯೊಂದು ಸಂಯೋಜನೆ ಮತ್ತು ವಿಭಾಗಗಳಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆಯ ಮಾಹಿತಿಯನ್ನು ಜಿಲ್ಲಾ ಉಪ ನಿರ್ದೇಶಕರ ಮೂಲಕ ಈ ಕಛೇರಿಗೆ ಸಲ್ಲಿಸತಕ್ಕದ್ದು.
11. ಈ ಹೆಚ್ಚುವರಿ ವಿಭಾಗಗಳ ದಾಖಲಾತಿಯು ಹೆಚ್ಚುವರಿ ಸಂಯೋಜನೆ ಅಥವಾ ಹೆಚ್ಚುವರಿ ವಿಭಾಗದ ಮಂಜೂರತಿ ಎಂದು ಪರಿಗಣಿಸತಕ್ಕದ್ದಲ್ಲ.
12. ಹೆಚ್ಚುವರಿ ವಿಷಯ/ಸಂಯೋಜನೆ ಮಂಜೂರಾತಿಯಿಂದ ಯಾವುದೇ ರೀತಿಯ ಅನಾರೋಗ್ಯಕರ ಸ್ಪರ್ಧೆ ಉಂಟಾಗಬಾರದು ಹಾಗೂ ಈಗಾಗಲೇ ಅಸ್ತಿತ್ವದಲ್ಲಿರುವ ಸುತ್ತಮುತ್ತಲಿನ ಕಾಲೇಜುಗಳ ಬೆಳವಣಿಗೆ ಹಾಗೂ ಅಭಿವೃದ್ಧಿಗೆ ದಕ್ಕೆ ಉಂಟಾಗಬಾರದು ಮತ್ತು ಈ ಬಗ್ಗೆ ಹೆಚ್ಚುವರಿ ವಿಭಾಗಗಳ ಸಂಬಂಧದಲ್ಲಿ ನೆರೆಹೊರೆಯ ಕಾಲೇಜುಗಳಿಂದ ಅಥವಾ ಪೋಷಕರಿಂದ ಆಕ್ಷೇಪಣೆಗಳು ಬಂದಲ್ಲಿ ಅವುಗಳನ್ನು ಗಂಭೀರವಾಗಿ ಪರಿಗಣಿಸಲಾಗುವುದು.

5/8/16

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು,

1. ಸಂಭಂದಪಟ್ಟ ಜಿಲ್ಲಾ ಉಪ ನಿರ್ದೇಶಕರುಗಳಿಗೆ – ಮಾಹಿತಿಗಾಗಿ
2. ಸಂಭಂದಪಟ್ಟ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. 'ಇ' ಆಡಳಿತ ಶಾಖೆ, ಪಪೂಶಿಇ, ಬೆಂಗಳೂರು –ಅಂತರ್ ಜಾಲದಲ್ಲಿ ಅಳವಡಿಸಲು
4. ಕಛೇರಿ ಪ್ರತಿ.